ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರವು ರೂಪಿಸಿರುವ ಯೋಜನೆಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

8 (16) ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರವು ರೂಪಿಸಿರುವ ಕಾರ್ಯಕ್ರಮಗಳೇನು ; (ಮಾಹಿತಿ ನೀಡುವುದು)

(ಆ) ಸರ್ಕಾರವು ಯಾವ ಯಾವ ರೀತಿಯ ಕಾರ್ಮಿಕರನ್ನು ಗುರುತಿಸಿದೆ ; ಹಾಸನ ಜಿಲ್ಲೆಯಲ್ಲಿ ಇಂತಹ ಎಷ್ಟು ಕಾರ್ಮಿಕರಿದ್ದಾರೆ ; ಈ ಕಾರ್ಮಿಕರನ್ನು ಗುರುತಿಸಿ ಅವರಿಗಾಗಿ ಸರ್ಕಾರವು ರೂಪಿಸಿರುವ ಯೋಜನೆಗಳನ್ನು ತಲುಪಿಸಲು ಅನುಸರಿಸುತ್ತಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಹಾಸನ ಜಿಲ್ಲೆಯಲ್ಲಿ ಯಾವ ಯಾವ ಕೈಗಾರಿಕೆ ಮತ್ತು ಉದ್ಯಮಗಳಲ್ಲಿ ಎಷ್ಟೆಷ್ಟು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ ; (ವಿವರ ನೀಡುವುದು)

(ಈ) ಹಾಸನ ಜಿಲ್ಲೆಯ ಕಾರ್ಮಿಕ ಇಲಾಖೆಗೆ ಕಳೆದ 3 ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ ? (ವಿವರ ನೀಡುವುದು)